ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ನೆರಿಯ ಗ್ರಾಮದ ವ್ಯಾಪ್ತಿಯ ರಕ್ಷಿತಾರಣ್ಯದ ಕುರಿತು ಮಾಹಿತಿ

ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

5 (132) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳ್ತಂಗಡಿ ತಾಲ್ಲೂಕು ನೆರಿಯ ಗ್ರಾಮದ ಸರ್ವೆ ನಂ.144 ಹಾಗೂ 145ರಲ್ಲಿ ಮೀಸಲು ಅರಣ್ಯಗಳ ಅಧಿಸೂಚನೆಗಳ ಆಧಾರದಲ್ಲಿ ಮೀಸಲು ಅರಣ್ಯಗಳ ಗಡಿಯನ್ನು ಗ್ರಾಮದ ನಕ್ಷೆಯ ಮೇಲೆ ಗುರುತಿಸಿ ಪಹಣಿ ಇಂದೀಕರಿಸುವ ಕುರಿತಂತೆ ಕಚೇರಿ ಪತ್ರ ಸಂಖ್ಯೆ:ಬಿ/ಕಾಯೋಶಿ/ಮೋಜಣಿ/ಸಿಆರ್.14/2017-18 ದಿನಾಂಕ: 26.09.2018ಕ್ಕೆ ಸಂಬಂಧಿಸಿದಂತೆ ವಿಸ್ಕøತ ವರದಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಅಕ್ರಮ-ಸಕ್ರಮ ಅರ್ಜಿ ವಿಲೇವಾರಿ ಯಾವ ಹಂತದಲ್ಲಿದೆ ಇದರಲ್ಲಿ ಡೀಮ್ಡ್ ಫಾರೆಸ್ಟ್ ಎಂದು ನಮೂದಾಗಿರುವ ಅರ್ಜಿಯ ಕುರಿತಂತೆ ಫಲಾನುಭವಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅರ್ಜಿ ವಿಲೇವಾರಿ ಕುರಿತಂತೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಈ ರಕ್ಷಿತಾರಣ್ಯದ ಜಂಟಿ ಸರ್ವೆ ಕಾರ್ಯ ನಡೆದಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)